ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 18–11–2020

# ಪತ್ರಿಕಾ ಆಮಂತ್ರಣ

**1) 2020–21ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಪ್ರಾರಂಭಿಕ ಸಭೆ :**

ದಿನಾಂಕ: 19–11–2020, ಗುರುವಾರ, ಸಮಯ: 11–00 ಗಂಟೆಗೆ

ಸ್ಥಳ: ಶಾಸಕರ ಭವನ–5ರ ಸಮ್ಮೇಳನ ಸಭಾಂಗಣ, ಬೆಂಗಳೂರು.

ವಿ. ಸೂ. : ಸಮಿತಿಯ ಪ್ರಾರಂಭಿಕ ಸಭೆಯ ಮೊದಲ 3 ನಿಮಿಷಗಳ ಕಾಲ ಚಿತ್ರೀಕರಿಸಲು ಅವಕಾಶ ನೀಡಲಾಗಿದೆ.

**2) ಮತ್ಸ್ಯಸಂಪದ ಯೋಜನೆ ಹಾಗೂ ಮೀನುಗಾರಿಕೆ ಯೋಜನೆಗಳ ಕುರಿತು ಪತ್ರಿಕಾಗೋಷ್ಠಿ :**

ಕೋಟ ಶ್ರೀನಿವಾಸ ಪೂಜಾರಿ,

ಹಿಂದೂ ಧಾರ್ಮಿಕ ಮತ್ತು ಧರ್ಮದಾಯ ದತ್ತಿ, ಮೀನುಗಾರಿಕೆ ಸಚಿವರು

ದಿನಾಂಕ : 19–11–2020 ಗುರುವಾರ ಸಮಯ : ಬೆಳಿಗ್ಗೆ 11–00 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ 343, ವಿಧಾನ ಸೌಧ, ಬೆಂಗಳೂರು

3) ಶಿಕ್ಷಕರ ಕ್ಷೇತ್ರದಿಂದ ಮತ್ತು ಪದವೀಧರರ ಕ್ಷೇತ್ರದಿಂದ ಚುನಾಯಿತರಾಗಿರುವ ಶಾಸಕರುಗಳಾದ ಶ್ರೀ ಪುಟ್ಟಣ್ಣ ಮತ್ತು ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಎಸ್.ವ್ಹಿ. ಸಂಕನೂರ ಮತ್ತು ಶ್ರೀ ಚಿದನಂದ್ ಎಂ. ಗೌಡ ಅವರುಗಳು ಪ್ರಮಾಣ ವಚನ ಸ್ವೀಕಾರ ಸಮಾರಂಭ :

ದಿನಾಂಕ: 19–11–2020, ಗುರುವಾರ, ಸಮಯ: ಅಪರಾಹ್ನ 12–00 ಗಂಟೆಗೆ

ಸ್ಥಳ: ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ವಾಯುಮಾಲಿನ್ಯ ತಡೆ ನಮ್ಮೆಲ್ಲರ ಕರ್ತವ್ಯ : ಲಕ್ಷ್ಮಣ ಸವದಿ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ವಾಯುಮಾಲಿನ್ಯ ನಿಯಂತ್ರಣದ ಬಗ್ಗೆ ಜಾಗೃತಿ ಅಗತ್ಯವಾಗಿದ್ದು ವಾಹನ ಹೊರಸೂಸುವ ಹೊಗೆಯಿಂದಲೆ ವಾಯುಮಾಲಿನ್ಯ ಉಂಟಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಮತ್ತು ಸಾರಿಗೆ ಸಚಿವ ಲಕ್ಷಣ ಸವದಿ ತಿಳಿಸಿದರು

ವಾಯುಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚರಣೆ – 2020 ಅಂಗವಾಗಿ ಇಂದು ಕಂಠೀರವ ಕ್ರೀಡಾಂಗಣದಲ್ಲಿ "ಕಾಲ್ನಡಿಗೆ ಮತ್ತು ವಿದ್ಯುತ್ ಚಾಲಿತ ವಾಹನಗಳ ಜಾಥ" ಕಾರ್ಯಕ್ರಮವನ್ನು ಗಿಡಕ್ಕೆ ನೀರನ್ನು ಹರಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

. ರಾಷ್ಟ್ರದ ರಾಜಧಾನಿಯಾದ ದೆಹಲಿಯಲ್ಲಿ ದೈನಂದಿನ ಉಸಿರಾಡುವ ವಾಯುವಿನಲ್ಲಿ ವಿಪರೀತ ಕಲುಷಿತ ಅಂಶಗಳು ಮಿಶ್ರಣಗೊಂಡು ಹಲವು ಸಮಸ್ಯೆಗಳಿಗೆ ಕಾರಣವಾಗಿದೆ. ದಿನೇ ದಿನೇ ಹೆಚ್ಚುತ್ತಿರುವ ವಾಯುಮಾಲಿನ್ಯದಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಸ್ತಮಾ, ಹೃದಯಸಂಬಂಧದ ಕಾಯಿಲೆಗಳು ವಾಯುಮಾಲಿನ್ಯದಿಂದ ಹೆಚ್ಚಾಗುತ್ತಿದೆ ಎಂದು ವೈದ್ಯರ ಸಂಶೋಧನೆಯಿಂದ ತಿಳಿದುಬಂದಿದೆ. ಇಂತಹ ಸಂದರ್ಭದಲ್ಲಿ ವಾಯುಮಾಲಿನ್ಯ ತಡೆಗಟ್ಟುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ವಾಯುಮಾಲಿನ್ಯವನ್ನು ನಿಯಂತ್ರಿಸಲು ಬೆಂಗಳೂರು ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯುತ್ ಚಾಲಿತ ವಾಹನಗಳನ್ನು ನೋಂದಾಯಿಸಲು ಉತ್ತೇಜನ ನೀಡಲಾಗುತ್ತಿದೆ ಎಂದರಲ್ಲದೆ ಇದೇ ಸಂದರ್ಭದಲ್ಲಿ ಸಚಿವರು ವಾಯುಮಾಲಿನ್ಯ ಜಾಗೃತಿ ಮಾಸಾಚರಣೆ ನವೆಂಬರ್–2020 ಹಾಗೂ **Air Pollution Control month of November -2020** ಪತ್ರಿಕೆಗಳನ್ನು ಬಿಡುಗಡೆ ಮಾಡಿದರು.

ನಂತರ ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತ ಎನ್. ಶಿವಕುಮಾರ್ ಅವರು ಮಾತನಾಡುತ್ತಾ ವಾಯುಮಾಲಿನ್ಯದಿಂದ ಆಗುತ್ತಿರುವ ಪ್ರತಿಕೂಲ ದುಷ್ಪರಿಣಾಮವನ್ನು ತಡೆಗಟಲು ಕರ್ನಾಟಕ ರಾಜ್ಯದಲ್ಲಿ ಸಾರಿಗೆ ಇಲಾಖೆಯಿಂದ ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ವಾಯುಮಾಲಿನ್ಯ ನಿಯಂತ್ರಣ ಮಾಸಾಚರಣೆಯನ್ನು ಆಚರಿಸಲಾಗುತ್ತದೆ. ಭೂಮಿಯು ನಮ್ಮೆಲ್ಲರ ವಾಸಸ್ಥಳವಾಗಿದ್ದು ಪರಿಸರವನ್ನು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಭೂತಾಯಿಯನ್ನು ಮಲಿನಗೊಳಿಸುತ್ತಿದ್ದೇವೆ. ಸಂಶೋಧನೆಯ ಪ್ರಕಾರ ಶೇಖಡಾ 42% ರಷ್ಟು ವಾಯುಮಾಲಿನ್ಯವು ವಾಹನಗಳು ಹೊರಸೂಸುವ ಹೊಗೆಯಿಂದ ಆಗುತ್ತಿದೆ. ಅನಾವಶ್ಯಕವಾಗಿ ಸ್ವಂತ ವಾಹನ ಉಪಯೋಗಿಸದೆ ಹೆಚ್ಚಾಗಿ ಸಾಮೂಹಿಕ ಸಾರ್ವಜನಿಕ ವಾಹನವನ್ನು ಉಪಯೋಗಿಸಬೇಕು. ವಿಷಕಾರಕ ಅನಿಲದಿಂದ ಪರಿಸರಕ್ಕೆ ಹೊಡೆತವಾಗುತ್ತಿದ್ದು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಡೀಸೆಲ್, ಪೆಟ್ರೋಲ್ ವಾಹನಗಳ ಬದಲಿಗೆ ಎಲೆಕ್ಟ್ರಾನಿಕ್ ವಾಹನವನ್ನು ಉಪಯೋಗಿಸಲು ಉತ್ತೇಜನ ನೀಡಬೇಕು ಎಂದರು.

ಖ್ಯಾತ ಚಲನಚಿತ್ರ ನಟ, ನಿರ್ಮಾಪಕ ಪ್ರೇಮ್ ಅವರು ಮಾತನಾಡಿ, ಸೈಕಲ್‌ನಲ್ಲಿ ಓಡಾಡಿದರೆ ವಾಯುಮಾಲಿನ್ಯ ನಿಯಂತ್ರಣದಲ್ಲಿರುತ್ತದೆ ಹಾಗೂ ಆರೋಗ್ಯವು ಉತ್ತುಮವಾಗಿರುತ್ತದೆ. ಗಿಡಗಳನ್ನು ಹೆಚ್ಚಾಗಿ ಬೆಳೆಸಿ ಮತ್ತು ಉಳಿಸಿ ಎಂದರು.

ಕಾರ್ಯಕ್ರಮದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರಾದ ಮಂಜುನಾಥ್ ಪ್ರಸಾದ್, ರಾಷ್ಟ್ರೀಯ ಬ್ಯಾಡ್ಮಿಂಟನ್ ಕ್ರೀಡಾಪಟು ಕುಮಾರಿ ಆವಂತಿಕಾ ಹಾಗೂ ಗಣ್ಯರು ಭಾಗವಹಿಸಿದ್ದರು.

ಛಾಯಾಚಿತ್ರ ಲಗತ್ತಿಸಿದೆ )

## ಅಲ್ಪ ಸಂಖ್ಯಾತರ ಕಲ್ಯಾಣದ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಮಿತಿಯ ಸದಸ್ಯರ ನಿರ್ದೇಶನ ಅಗತ್ಯ : ದಿನಕರ್ ಕೇಶವ ಶೆಟ್ಟಿ ಸೂಚನೆ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ): ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ರೂಪಿಸುವ ಯೋಜನೆ-ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಮಿತಿಯ ಸದಸ್ಯರ ಸೂಕ್ತ ನಿರ್ದೇಶನ ಮತ್ತ ಶಿಫಾರಸ್ಸು ಅತ್ಯಗತ್ಯ ಎಂದು ಸಮಿತಿಯ ಅಧ್ಯಕ್ಷ ದಿನಕರ್ ಕೇಶವ ಶೆಟ್ಟಿ ತಿಳಿಸಿದರು.

ಅವರು ಇಂದು ಶಾಸಕರ ಭವನ-2ರ ಸಮ್ಮೇಳನಾ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ವಿಧಾನಮಂಡಲದ 2020-21ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಪ್ರಾರಂಭಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಮಿತಿಯು ಅಸ್ತಿತ್ವಕ್ಕೆ ಬಂದ ನಂತರ ಈವರೆಗೆ ಮೂರು ಮಧ್ಯಂತರ ವರದಿ ಮತ್ತು ಜಿಲ್ಲಾವಾರು ಪ್ರಗತಿ ಪರಿಶೀಲನಾ ಸಭೆ ನಡೆಸಲಾಗಿದೆ. ಅಲ್ಲದೆ ವಿದೇಶ ಅಧ್ಯಯನ ಪ್ರವಾಸ ಕೈಗೊಂಡ ಬಗೆಗಿನ ವರದಿ ಸೇರಿದಂತೆ 55 ವರದಿಗಳನ್ನು ಉಭಯ ಸದನಗಳಲ್ಲಿ ಮಂಡಿಸಲಾಗಿದೆ ಎಂದರು.

ಸಭೆಯಲ್ಲಿ ಸಮಿತಿಯ ಸದಸ್ಯರುಗಳು ಹಾಗೂ ಕರ್ನಾಟಕ ವಿಧಾನ ಸಭೆ ಸಚಿವಾಲಯದ ಅಧಿಕಾರಿಗಳು ಉಪಸ್ಥಿತರಿದ್ದರು.

## ನವೆಂಬರ್ 20ರಂದು ಪೊಲೀಸ್ ಇಲಾಖೆ ಅಧಿಕಾರಿ-ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ): ರಾಜ್ಯ ಪೊಲೀಸ್ ಇಲಾಖೆಯ 243 ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭವನ್ನು ನವೆಂಬರ್ 20 ರಂದು ಬೆಳಿಗ್ಗೆ 10-30 ಗಂಟೆಗೆ ಬೆಂಗಳೂರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪದಕ ಪ್ರದಾನ ಮಾಡುವರು. ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

# ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

**ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವ ಪ್ರಭು ಬಿ. ಚವ್ಹಾಣ್ ಅವರು ನವೆಂಬರ್ 20 ರವರೆಗೆ ಬೀದರ್, ಕಲಬುರಗಿ, ವಿಜಯಪುರ, ಬೆಳಗಾವಿ, ಧಾರವಾಡ, ಕಾರವಾರ, ಹಾವೇರಿ ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

# ನಾಮಪತ್ರ ಸಲ್ಲಿಕೆ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ಇತ್ತೀಚೆಗೆ ಕೋವಿಡ್-19 ನಿಂದ ನಿಧನರಾದ ರಾಜ್ಯಸಭಾ ಸದಸ್ಯ ಅಶೋಕ್ ಗಸ್ತಿ ಅವರಿಂದ ತೆರವಾದ ಸ್ಥಾನಕ್ಕೆ ನಡೆಯಲಿರುವ ಚುನಾವಣೆಗೆ ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿ ಕೆ.ನಾರಾಯಣ್ ಅವರು ಇಂದು ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ, ತೋಟಗಾರಿಕೆ ಸಚಿವ ನಾರಾಯಣ ಗೌಡ, ಶಾಸಕರಾದ ಸುನಿಲ್ ಕುಮಾರ್ ಅವರು ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

# ರಾಜ್ಯ ಸರ್ಕಾರಿ ನೌಕರರಿಗೆ ಬಯೋಮೆಟ್ರಿಕ್ ಪುನರಾರಂಭ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ರಾಜ್ಯ ಸರ್ಕಾರಿ ನೌಕರರಿಗೆ ಕರೋನಾ ವೈರಾಣು ಸಮಸ್ಯೆ ಕಂಡು ಬಂದ ಹಿನ್ನೆಲೆಯಲ್ಲಿ ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳ ಆರೋಗ್ಯದ ದೃಷ್ಟಿಯಿಂದ ದಿನಾಂಕ 31–05–2020 ರವರೆಗೆ ಬಯೋಮೆಟ್ರಿಕ್ ಹಾಜರಾತಿ ನಮೂದಿಸುವಲ್ಲಿ ವಿನಾಯಿತಿ ನೀಡಲಾಗಿತ್ತು.

ಪ್ರಸ್ತುತ ಕೋವಿಡ್ –19 ಪ್ರಕರಣಗಳು ಮತ್ತು ಪಾಸಿಟೀವ್ ಪ್ರಕರಣಗಳ ಸಂಖ್ಯೆ ಬೆಂಗಳೂರು ಮತ್ತು ಬೆಂಗಳೂರಿನ ಹೊರಗೆ ಕಡಿಮೆಯಾಗುತ್ತಿರುವುದರಿಂದ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಪ್ರಾರಂಭಿಸಲಾಗಿದೆ ಹಾಗೆಯೇ ಬಯೋಮೆಟ್ರಿಕ್ ಯಂತ್ರಗಳ ಪಕ್ಕದಲ್ಲಿ ಸ್ಯಾನಿಟೈಸರ್‌ಗಳ ವ್ಯವಸ್ಥೆ ಕಲ್ಪಿಸಲು ಸೂಚಿಸಲಾಗಿದೆ ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಸೆಂಬರ್ 7 ರಿಂದ 15 ರವರೆಗೆ ಬೆಂಗಳೂರಿನಲ್ಲಿ ವಿಧಾನ ಮಂಡಲದ ಅಧಿವೇಶನ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ಡಿಸೆಂಬರ್ 7 ರಿಂದ 15 ರವರೆಗೆ ಕರ್ನಾಟಕ ವಿಧಾನ ಮಂಡಲದ ಅಧಿವೇಶನ ನಡೆಯಲಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಮಾಧುಸ್ವಾಮಿ ಅವರು ಇಂದು ಇಲ್ಲಿ ತಿಳಿಸಿದರು. ಅವರು ಸಚಿವರ ಸಂಪುಟ ಸಭೆಯ ನಂತರ ಮಾಧ್ಯಮದವರಿಗೆ ಈ ಮಾಹಿತಿ ನೀಡಿದರು. ಸಚಿವ ಸಂಪುಟ ಸಭೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗೆ ಒಪ್ಪಿಗೆ ನೀಡಲಾಯಿತು. ಬೆಳಗಾವಿ ನಗರ ಸಭೆ ವ್ಯಾಪ್ತಿಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಬೆಳಗಾವಿ ನಗರ ಸಭೆಗೆ 28.5 ಕೋಟಿ ರೂ. ಬಿಡುಗಡೆಗೆ ಒಪ್ಪಿಗೆ ನೀಡಲಾಯಿತು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡಲು ನ್ಯಾಯಮೂರ್ತಿ ನಾಗಮೋಹನದಾಸ್ ವರದಿ ನೀಡಿದೆ ಈ ಕುರಿತು ಪರಿಶೀಲಿಸಲು ಸಚಿವ ಸಂಪುಟ ಉಪ ಸಮಿತಿ ರಚಿಸಲು ತೀರ್ಮಾನಿಸಲಾಯಿತು. ಪರಿಶಿಷ್ಟ ಜಾತಿ ಜೊತೆಗೆ ಈಗಿರುವ ಶೇ 15 ರಿಂದ 17 ಕ್ಕೆ ಹೆಚ್ಚಳ ಪರಿಶಿಷ್ಠ ಪಂಗಡದ ಈಗಿರುವ ಶೇ 3 ರಿಂದ 7 ಕ್ಕೆ ಹೆಚ್ಚಳಕ್ಕೆ ಸಂಬಂಧಿಸಿದಂತೆ ಉಪ ಸಮಿತಿ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು. ಸಮಿತಿಯ ಸದಸ್ಯರನ್ನು ಮುಖ್ಯಮಂತ್ರಿಯವರು ರಚಿಸಲಿದ್ದಾರೆ.

2021 ನೇ ಕ್ಯಾಲೆಂಡರ್ ವರ್ಷದ ರಜಾದಿನಗಳಿಗೆ ಒಪ್ಪಿಗೆ ನೀಡಲಾಯಿತು. 21 ದಿನಗಳು ಸಾರ್ವತ್ರಿಕ ರಜೆಗಳು, 19 ದಿನಗಳ ನಿರ್ಭಂದಿತ ರಜೆಗಳು ಒಳಗೊಂಡಿರುತ್ತದೆ. ದಕ್ಷಿಣ ಕನ್ನಡ ಜಿಲ್ಲೆಯ ಕಟೀಲ್ ಪಟ್ಟಣ ಪಂಚಾಯತಿಯನ್ನು ಮೇಲ್ದರ್ಜೆಗೆ ಏರಿಸಲು ತೀರ್ಮಾನಿಸಲಾಯಿತು.

ವಿಜಯನಗರ ಜಿಲ್ಲೆಯನ್ನು ಪ್ರತ್ಯೇಕ ಜಿಲ್ಲೆಯನ್ನಾಗಿ ಮಾಡಲು ಒಪ್ಪಿಗೆ ನೀಡಲಾಯಿತು. ಈ ಕುರಿತು ಸಧ್ಯದಲ್ಲೇ ಮಾರ್ಗಸೂಚಿ ಪ್ರಕಟಿಸಲಾಗುವುದು.

ಮರಾಠ ಸಮುದಾಯದ ನಿಗಮ ಪ್ರಾರಂಭಿಸಲು ಇಂದು ನಡೆದ ಸಚಿವ ಸಂಪುಟ ಸಭೆಯು ಒಪ್ಪಿಗೆ ನೀಡಿದೆ. ಕೇಂದ್ರ ಸರ್ಕಾರ ನೆರೆ ಪರಿಹಾರ ಕಾಮಗಾರಿಗೆ ಪ್ರಾರಂಭಿಸಲು ಇತ್ತೀಚೆಗೆ 500 ಕೋಟಿ ರೂ. ಬಿಡುಗಡೆ ಮಾಡಿದೆ.

ಕೃಷ್ಣ ಜಲಭಾಗವಯ ನಿಗಮ, ಕಾವೇರಿ ನೀರಾವರಿ ನಿಗಮ ಮತ್ತು ವಿಶ್ವೇಶ್ವರಯ್ಯ ಅಭಿವೃದ್ಧಿ ನಿಗಮಕ್ಕೆ ಸಾಲ ಪಡೆಯಲು ಸಚಿವ ಸಂಪುಟದಲ್ಲಿ ಒಪ್ಪಿಗೆ. ಲೋಕಸೇವಾ ಆಯೋಗದ ಅನುಮತಿ ಇಲ್ಲೆ ಕೇಂದ್ರ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ಸರ್ಕಾರಿ ಅಧಿಕಾರಿ ಪಡೆಯಲು ಒಪ್ಪಿಗೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಯಿತು ಎಂದು ಸಚಿವ ಮಾಧುಸ್ವಾಮಿ ಅವರು ತಿಳಿಸಿದರು.

## ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ನೂತನ ವೆಬ್‌ಸೈಟ್ ಹಾಗೂ ಪತ್ರಿಕೆ ಲೋಕಾರ್ಪಣೆ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):

ತಮ್ಮ ಕಳೆದ ನಾಲ್ಕು ವರ್ಷ 11 ತಿಂಗಳ ಅಧಿಕಾರದ ಅವಧಿಯಲ್ಲಿ 63,600 ದಾವೆಗಳನ್ನು ಇತ್ಯರ್ಥಗೊಳಿಸಿರುವುದು ತಮಗೆ ತೃಪ್ತಿ ತಂದಿದೆ ಎಂದು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಅಧ್ಯಕ್ಷ ನ್ಯಾಯಮೂರ್ತಿ ಡಾ: ಕೆ. ಭಕ್ತವತ್ಸಲ ಅವರು ತಿಳಿಸಿದರು.

ಇಂದು ಕಂದಾಯ ಭವನದಲ್ಲಿ ತಮ್ಮ ಕಛೇರಿಯಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ಸೇವಾ ಕಾನೂನು ವರದಿ ಪತ್ರಿಕೆ ಹಾಗೂ ನ್ಯಾಯಮಂಡಳಿಯ ನೂತನ ವೆಬ್‌ಸೈಟ್ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು ಭಾರತದಲ್ಲಿಯೇ ಅತ್ಯಂತ ಹೆಚ್ಚು ದಾವೆಗಳನ್ನು ಇತ್ಯರ್ಥಪಡಿಸಿದ ಕೀರ್ತಿ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಗೆ ಸಲ್ಲುತ್ತದೆ. ಇದು ಸಾಧ್ಯವಾಗಿದ್ದು ಇಲ್ಲಿನ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಹಕಾರದಿಂದ ಎಂದು ಕೃತಜ್ಞತೆ ಸಲ್ಲಿಸಿದರು.

ತಮ್ಮ ಅಧಿಕಾರದ ಅವಧಿಯಲ್ಲಿ ಅಂದುಕೊಂಡಿದ್ದನ್ನು ಸಾಧಿಸಿದ ಹೆಮ್ಮೆ ಇದೆ, ಹೊಸದಾಗಿ ಅಧ್ಯಕ್ಷತೆಯನ್ನು ವಹಿಸಿಕೊಂಡ ಸಮಯದಲ್ಲಿ ಅನೇಕ ಸವಾಲುಗಳಿದ್ದವು. ತಮ್ಮ ನೇತೃತ್ವದಲ್ಲಿ

ಬೆಳಗಾವಿ ಪೀಠವನ್ನು ಉದ್ಘಾಟಿಸಿದ್ದು ಹಾಗೂ ಬಳ್ಳಾರಿ ಮತ್ತು ಕಲಬುರಗಿ ಪೀಠಗಳ ಸ್ಥಾಪನೆಗೆ ಅಧಿಸೂಚನೆ ಹೊರಡಿಸಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ನೂತನ ವೆಬ್‌ಸೈಟ್ ಹಾಗೂ ಸೇವಾ ಕಾನೂನು ವರದಿ ಪತ್ರಿಕೆ ವಕೀಲರಿಗೆ ಅತ್ಯಂತ ಸಹಾಯಕಾರಿ ವೇದಿಕೆಯಾಗಿದ್ದು ಸಾರ್ವಜನಿಕರೂ ಸಹ ಇದರ ಲಾಭ ಪಡೆಯಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನ್ಯಾಯಮೂರ್ತಿ ಆರ್. ಬಿ. ಬೂದಿಹಾಳ್ ಅವರು ಮಾತನಾಡಿ ಪ್ರತಿ ಕಾನೂನು ತನ್ನ ನೆಲವನ್ನು ಅವಲಂಭಿಸಿರುತ್ತದೆ. ಯಾರೂ ಸಹ ಅತಿ ಬುದ್ದಿವಂತನಾಗಿರಲು ಸಾಧ್ಯವಿಲ್ಲ. ಪ್ರತಿ ಕ್ಷಣ ಜ್ಞಾನ ವೃದ್ಧಿಸಿಕೊಳ್ಳುವವರಿಗೆ ಸೇವಾ ಕಾನೂನು ವರದಿ ಪತ್ರಿಕೆ ದಾವೆಗಳು ಹಾಗೂ ತೀರ್ಪಿನ ಕುರಿತು ಅತ್ಯಂತ ಸಹಕಾರಿಯಾಗಲಿವೆ ಎಂದರು.

ನ್ಯಾಯಮೂರ್ತಿ ಭಕ್ತವತ್ಸಲ ಅವರ ಅಧ್ಯಕ್ಷತೆಯಲ್ಲಿ ನ್ಯಾಯಮಂಡಳಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು ಅವರ ನೇತೃತ್ವದಲ್ಲಿ ಅಭಿವೃದ್ಧಿಪಡಿಸಲಾಗಿರುವ ನೂತನ ವೆಬ್‌ಸೈಟ್ ಹಾಗೂ ಹೊಸ ರೂಪದ ಪತ್ರಿಕೆ ವಿವಿಧ ರೀತಿಯ ಮಾದರಿ ತೀರ್ಪುಗಳ ಕುರಿತು ಬೆಳಕು ಚೆಲ್ಲಲಿದೆ ಎಂದು ಹೇಳಿದರು.

ಕರ್ನಾಟಕ ಬಾರ್‌ಕೌನ್ಸಿಲ್ ಅಧ್ಯಕ್ಷ ಜಿ. ಎಂ. ಅನೀಲ್‌ಕುಮಾರ್ ಮಾತನಾಡಿ ನೂತನ ವೆಬ್‌ಸೈಟ್ ವಕೀಲರಿಗಷ್ಟೇ ಅಲ್ಲದೆ ಸರ್ಕಾರಿ ನೌಕರರಿಗೂ ಸಹ ಉಪಯುಕ್ತವಾಗಿದ್ದು ಅತ್ಯಂತ ವೇಗದಲ್ಲಿ ದಾವೆಗಳನ್ನು ಬಗೆಹರಿಸಿ ತೀರ್ಪು ನೀಡಿರುವ ಕೀರ್ತಿ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಗೆ ಸಲ್ಲುತ್ತದೆ ಎಂದು ಹೇಳಿ ನ್ಯಾಯಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಂಡಳಿಯ ಆಡಳಿತಾತ್ಮಕ ಸದಸ್ಯರುಗಳಾದ ಶ್ರೀಮತಿ ಜಿ. ಲತಾ ಕೃಷ್ಣರಾವ್, ಡಾ: ಎಸ್.ಕೆ. ಪಾಟ್ನಾಯಕ್, ಎನ್. ಶಿವಶೈಲಂ ಹಾಗೂ ನ್ಯಾಯಾಂಗ ಸದಸ್ಯರಾದ ನಾರಾಯಣ್ ಅವರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಕನ್ನಡ ಕಲಿಯುವ ಆಸಕ್ತಿಯಿದ್ದರೂ ಹಿಂದಿ, ಸಂಸ್ಕೃತ ಕಲಿಯಲು ಪ್ರೋತ್ಸಾಹಿಸುತ್ತಿರುವುದು ಕ್ರಮವಲ್ಲ.: ಟಿ.ಎಸ್.ನಾಗಾಭರಣ

**ಬೆಂಗಳೂರು:** ಕರ್ನಾಟಕದಲ್ಲಿರುವ ಕೇಂದ್ರೀಯ ವಿದ್ಯಾಲಯಗಳಲ್ಲಿ ಕನ್ನಡವನ್ನು ಕಡೆಗಣಿಸಲಾಗುತ್ತಿದೆ. ವಿದ್ಯಾಲಯಕ್ಕೆ ಸೇರುವ ಮಕ್ಕಳಲ್ಲಿ ಕನ್ನಡ ಕಲಿಯುವ ಆಸಕ್ತಿಯಿದ್ದರೂ ಬಲವಂತವಾಗಿ ಹಿಂದಿ, ಸಂಸ್ಕೃತ ಕಲಿಯಲು ಪ್ರೋತ್ಸಾಹಿಸುತ್ತಿರುವುದು ಸರಿಯಾದ ಕ್ರಮವಲ್ಲ. ಇನ್ನು ಮುಂದೆ ಹೀಗಾಗದಂತೆ ಎಚ್ಚರವಹಿಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಕೇಂದ್ರೀಯ ವಿದ್ಯಾಲಯ ಸಂಘಟನೆಗೆ ತಾಕೀತು ಮಾಡಿದರು.

ಆಡಳಿತದಲ್ಲಿನ ಸಂಪೂರ್ಣ ಕನ್ನಡ ಅನುಷ್ಠಾನ ಕುರಿತು ವಿಧಾನಸೌಧದಲ್ಲಿಂದು ಕೇಂದ್ರೀಯ ವಿದ್ಯಾಲಯ ಸಂಘಟನೆಯೊಂದಿಗೆ ಜಾಲ ಸಂಪರ್ಕ ಸಭೆ ನಡೆಸಿದ ಅಧ್ಯಕ್ಷರು, ಕರ್ನಾಟಕದಲ್ಲಿರುವ ವಿದ್ಯಾ ಸಂಸ್ಥೆಯೊಂದು ಕನ್ನಡವನ್ನು ಕಡೆಗಣಿಸುವುದು ಸರಿಯಲ್ಲ. ಕೇಂದ್ರೀಯ ವಿದ್ಯಾಲಯವು ಸೇರಿದಂತೆ ರಾಜ್ಯದಲ್ಲಿರುವ ಎಲ್ಲ ಶೈಕ್ಷಣಿಕ ಸಂಸ್ಥೆಗಳು 2015ರ ಕನ್ನಡ ಭಾಷಾ ಕಲಿಕಾ ಅಧಿನಿಯಮದನ್ವಯ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬೇಕಿರುವುದು ನಿಮ್ಮ ಜವಾಬ್ದಾರಿಯಾಗಿದ್ದು, ಕೂಡಲೇ ಕನ್ನಡವನ್ನು ದ್ವಿತೀಯ ಭಾಷೆಯಾಗಿ ಬೋಧಿಸುವಂತೆ ಅಧ್ಯಕ್ಷರು ಸೂಚಿಸಿದರು.

ಪ್ರಾಧಿಕಾರ ನಡೆಸುವ ಮುಖ್ಯವಾದ ಕನ್ನಡ ಅನುಷ್ಠಾನ ಪರಿಶೀಲನಾ ಸಭೆಗೆ ಮುಖ್ಯವಾಗಿ ಆಯುಕ್ತರು ಪಾಲ್ಗೊಂಡು ಕನ್ನಡದ ಅನುಷ್ಠಾನ, ನೇಮಕಾತಿ ಇತ್ಯಾದಿಗಳ ಬಗ್ಗೆ ಚರ್ಚಿತವಾಗುವ ವಿಷಯಗಳ ಅನುಪಾಲನೆ ಮಾಡುವಲ್ಲಿ ತುರ್ತು ಕ್ರಮಗಳನ್ನು ಕೈಗೊಳ್ಳಬೇಕಾಗಿರುವುದು ಅವರ ಗುರುತರ ಜವಾಬ್ದಾರಿಯೂ ಆಗಿತ್ತು. ಅವರ ಅನುಪಸ್ಥಿತಿಯ ಬಗ್ಗೆ ಸೂಕ್ತ ಮಾಹಿತಿಯನ್ನು ಪ್ರಾಧಿಕಾರಕ್ಕೆ ತಿಳಿಸುವಂತೆ ಹೇಳಿದರು.

ಶಿಕ್ಷಣ ತಜ್ಞರಾದ ಡಾ.ವಿ.ಪಿ.ನಿರಂಜನಾರಾಧ್ಯ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ, ಕೇಂದ್ರೀಯ ವಿದ್ಯಾಲಯ ಸಂಘಟನೆಯ ಉಪ ಆಯುಕ್ತರಾದ ಡಾ.ಎನ್.ವಸಂತ್, ಅಧ್ಯಕ್ಷರ ಅಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ ಇತರರು ಉಪಸ್ಥಿರರಿದ್ದರು.

## ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ನವೆಂಬರ್ 19 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಂದರ್ಶನ ದಿನಾಂಕ ನಿಗದಿ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ 23-02-2018 ರಲ್ಲಿ ಅಧಿಸೂಚಿಸಲಾಗಿದ್ದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿನ ಗ್ರೂಫ್ ಬಿ ವೃಂದದ ಹುದ್ದೆಗಳಾದ ಸಹಾಯಕ ವೈಜ್ಞಾನಿಕ ಅಧಿಕಾರಿ 03 (ಹೈ.ಕ.) ಹಾಗ ಕಾನೂನು ಸಹಾಯಕ 01 (ಹೈ.ಕ.) ಹುದ್ದೆಗಳಿಗೆ ದಿನಾಂಕ 4-12-2020 ರಂದು ಪೂರ್ವಾಹ್ನ ಸಂದರ್ಶನ ನಿಗದಿಪಡಿಸಲಾಗಿದ್ದು ಸದರಿ ಹುದ್ದೆಗಳ ಸಂದರ್ಶನಕ್ಕೆ ಅಗತ್ಯ ದಾಖಲೆಗಳೊಂದಿಗೆ ಹಾಜರಾಗುವಂತೆ ಸೂಚಿಸಿಲಾಗಿದ್ದು, ಅರ್ಹ ಅಭ್ಯರ್ಥಿಗಳಿಗೆ ಈಗಾಗಲೇ ಸಂದರ್ಶನಗಳನ್ನು ರವಾನಿಸಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ದಿ ನಿಗಮದಿಂದ ವಿವಿಧ ಯೋಜನೆಯಲ್ಲಿ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ದಿ ನಿಗಮ ಬೆಂಗಳೂರು ಉತ್ತರ ವಿಭಾಗದಿಂದ 2020-21ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸಾಲ ಸೌಲಭ್ಯ ಪಡೆಯಲು ಮತೀಯ ಅಲ್ಪಸಂಖ್ಯಾತರಿಂದ ಅಂದರೆ ಮುಸ್ಲಿಂ, ಕ್ರಿಶ್ಚಿಯನ್, ಜೈನರು, ಭೌದ್ಧರು, ಸಿಖ್ಖರು, ಪಾರ್ಸಿಗಳು ಜನಾಂಗದವರಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

**<u>ಕೋವಿಡ್ –19 ರ ವಿಶೇಷ ಯೋಜನೆ</u> ಮೈಕ್ರೋ ಸಾಲ ವೈಯಕ್ತಿಕ ಯೋಜನೆ (ಮಹಿಳೆಯರಿಗೆ ಮಾತ್ರ)**

**kmdcmicro.karnataka.gov.in ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10/12/2020 ನಿಗದಿಯಾಗಿದ್ದು, ಅರ್ಜಿಯ ಪ್ರತಿ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ನಿಗಮದ ಕಛೇರಿಗೆ ದಿನಾಂಕ:21/12/2020 ರೊಳಗಾಗಿ ಸಲ್ಲಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.**

## <u>ಅರ್ಜಿ ಆಹ್ವಾನ</u>

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ):**

**ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಬೆಂಗಳೂರು ಉತ್ತರ ವಿಭಾಗ ದಿಂದ ಪ್ರತಿ ವರ್ಷದಂತೆ 2020–21ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸಾಲ ಸೌಲಭ್ಯ ಪಡೆಯಲು ಮತೀಯ ಅಲ್ಪಸಂಖ್ಯಾತರಿಂದ ಅಂದರೆ ಮುಸ್ಲಿಂ, ಕ್ರಿಶ್ಚಿಯನ್, ಜೈನರು, ಭೌದ್ಧರು, ಸಿಖ್ಖರು, ಪಾರ್ಸಿಗಳು ಜನಾಂಗದವರಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.**

**ಶ್ರಮಶಕ್ತಿ ಸಾಲದ ಯೋಜನೆ, ಮೈಕ್ರೋ (ಸಂಘ)ಸಾಲ ಸಹಾಯಧನ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಟ್ಯಾಕ್ಸಿ/ಗೂಡ್ಸ್ ಖರೀದಿ ಯೋಜನೆ, ಮನೆ ಮಾಳಿಗೆ ಯೋಜನೆ**
**kmdc.kar.nic.in/loan/login.aspx ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10/12/2020 ನಿಗದಿಯಾಗಿದ್ದು, ಅರ್ಜಿಯ ಪ್ರತಿ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ನಿಗಮದ ಕಛೇರಿಗೆ ದಿನಾಂಕ:21/12/2020 ರೊಳಗಾಗಿ ಸಲ್ಲಿಸಲು ಪ್ರಕಟಣೆ ತಿಳಿಸಿದೆ.**

## "ಕನ್ನಡ ವಿಷಯದಲ್ಲಿ ಅಲ್ಪಸಂಖ್ಯಾತರ ಇಲಾಖೆಯ ಅಸಹಕಾರ ಸಲ್ಲದು : ಪ್ರಾಧಿಕಾರ ಅಧ್ಯಕ್ಷರ ಆಕ್ರೋಶ"

ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಬಗ್ಗೆ ಅಲ್ಪಸಂಖ್ಯಾತರ ಇಲಾಖೆ ತೋರಿದ ಅಸಹಕಾರ ನಡೆಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಖಂಡಿಸುವುದಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯನ್ನು ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಮತ್ತು ದಿನಾಂಕವನ್ನು ದೂರವಾಣಿ ಮೂಲಕ ಸಂವಹನ ನಡೆಸಿ ನಿಗದಿ ಮಾಡಿದ್ದರೂ ಸಹ ಸದರಿ (ಜಾಲ ಸಂಪರ್ಕ ಸಭೆ) ಸಭೆಯಲ್ಲಿ ಅಲ್ಪಸಂಖ್ಯಾತರ ಇಲಾಖೆಯ

ಅಧಿಕಾರಿಗಳಾಗಲೀ, ಅಧೀನ ಇಲಾಖೆಗಳ ಅಧಿಕಾರಿಗಳಾಗಲೀ ಪಾಲ್ಗೊಳ್ಳದೇ ಉದಾಸೀನ ತೋರುವ ಮೂಲಕ ಸರ್ಕಾರದ ಸುತ್ತೋಲೆಯ ನಿಯಮವನ್ನು ಉಲ್ಲಂಘಿಸಿದಂತಾಗಿದೆ. ಇದು ಹೀಗೆ ಮುಂದುವರಿದಲ್ಲಿ ಅಗತ್ಯ ಕ್ರಮಕ್ಕಾಗಿ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ದೂರು ನೀಡುವುದಾಗಿ ತಿಳಿಸಿದ್ದಾರೆ.

ಇಲಾಖೆಯ ಪರಿಶೀಲನೆ ಎಂದ ಮೇಲೆ ಇಡೀ ಇಲಾಖೆಯ ಅಧಿಕಾರಿಗಳು ಮತ್ತು ಅಧೀನ ಇಲಾಖೆಯ ಅಧಿಕಾರಿಗಳು ಖುದ್ದು ಹಾಜರಿರುವುದು ಸ್ವಯಂವೇದ್ಯವಾಗಿದೆ. ಅಲ್ಲದೆ ಕನ್ನಡ ಭಾಷೆಯನ್ನು ಆಡಳಿತದ ಎಲ್ಲ ಹಂತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶಗಳನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ ಅಂತಹ ಉಲ್ಲಂಘನೆಯನ್ನು ಕರ್ತವ್ಯಲೋಪವೆಂದು ದಾಖಲಿಸಲು ಮತ್ತು ಅಂತಹವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆ ನೀಡಲು ಹಾಗೂ ರಾಜ್ಯ/ ಕೇಂದ್ರ ಸರ್ಕಾರದ ಇಲಾಖೆಗಳು/ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಅಧಿಕಾರ ನೀಡಲಾಗಿದೆ (ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 1994ರ ನಿಯಮ 19) ಎಂದು ವಿವರಿಸಿದ್ದಾರೆ.

ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲ ಮಟ್ಟದಲ್ಲಿ ಅನುಷ್ಠಾನವಾಗುತ್ತಿರುವುದರ ಪರಿಶೀಲನೆಯೂ ಸೇರಿದಂತೆ ಕನ್ನಡ ಭಾಷೆ ಮತ್ತು ಕನ್ನಡ ಜನರ ಹಿತಾಸಕ್ತಿಯನ್ನು ಕಾನೂನಿನನ್ವಯ ಸಂರಕ್ಷಿಸುವ ಸಲುವಾಗಿ ರಾಜ್ಯ ಶಾಸನದ ಮೂಲಕ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿರುತ್ತದೆ. ಪದೆ ಪದೇ ದಿನಾಂಕಗಳನ್ನು ಮುಂದೂಡಿದ್ದು, ಸಭೆ ಆಯೋಜಿಸುವಂತೆ ಕೋರಿದ ಪ್ರಾಧಿಕಾರಕ್ಕೆ ಮಾಹಿತಿ ನೀಡದೆ ಉದ್ಧಟತನ ತೋರಿದ್ದು ಸರಿಯಾದ ಕ್ರಮವಲ್ಲ. ಹಾಗಾಗಿ ಅಲ್ಪಸಂಖ್ಯಾತರ ಇಲಾಖೆ ಕನ್ನಡದ ವಿಷಯದಲ್ಲಿ ಅಸಹಕಾರ ತೋರಿದೆ ಎಂದು ನಾಗಾಭರಣ ಅವರು ದೂರಿದ್ದಾರೆ.